## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಬೆಂಗಳೂರು ಕೇಂದ್ರೀಯ ವಿಭಾಗ : ಬೆಂಗಳೂರು

ಕ್ರಸಂ: ಕರಾಸಾ/ಬೆಂ.ಕೇ.ವಿ/ಸಂ/ವಾಣಿಜ್ಯ/ 1334 /2018-19 ದಿನಾಂಕ: 04-09-2018

### " ಇ-ಟೆಂಡರ್ ಪ್ರಕಟಣೆ ಸಂಖ್ಯೆ: 20/2018 "

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗದ ವ್ಯಾಪ್ತಿಯಲ್ಲಿರುವ ನೆಲಮಂಗಲ ವಾಹನ ನಿಲ್ದಾಣದ ವಾಣಿಜ್ಯ ಸಂಕೀರ್ಣದಲ್ಲಿ ಖಾಲಿಯಿರುವ / ಖಾಲಿಯಾಗಲಿರುವ ಮಳಿಗೆ ಸಂಖ್ಯೆ-1 ರಲ್ಲಿ ಮೆಡಿಕಲ್ ಸ್ಟೋರ್ ಹಾಗೂ ಮಳಿಗೆ ಸಂಖ್ಯೆ:2, 4, 7, 8 ಮತ್ತು 11 ಗಳಲ್ಲಿ ಜನರಲ್ ಸ್ಟೋರ್ ವ್ಯಾಪಾರ ಮಾಡಲು ಐದು ವರ್ಷಗಳ ಅವಧಿಗೆ ಪರವಾನಿಗೆದಾರರನ್ನು ಆಯ್ಕೆ ಮಾಡಲು ದಿನಾಂಕ: 26-09-2018 ರಂದು ಇ-ಟೆಂಡರ್ ನಿಗದಿಪಡಿಸಲಾಗಿದೆ. ಮಳಿಗೆ ಸಂಖ್ಯೆ-1ಕ್ಕೆ ಚಾಲ್ತಿಯಲ್ಲಿರುವ ಸರ್ಕಾರಿ ಜಿಲ್ಲಾ ವೈದ್ಯಾಧಿಕಾರಿಗಳು ವಿತರಿಸಿರುವ ವಿಕಲಚೇತನರ ಪ್ರಮಾಣ ಪತ್ರ ಹಾಗೂ ಮಳಿಗೆ ಸಂಖ್ಯೆ-4 ಮತ್ತು 11 ಕ್ಕೆ ಚಾಲ್ತಿಯಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಮಳಿಗೆ ಸಂಖ್ಯೆ-2 ಕ್ಕೆ ಚಾಲ್ತಿಯಲ್ಲಿರುವ ಪರಿಶಿಷ್ಟ ಪಂಗಡದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಇ-ಟೆಂಡರ್‌ನಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ಅರ್ಜಿ ಶುಲ್ಕವನ್ನು ಮತ್ತು ಇ.ಎಂ.ಡಿ ಮೊತ್ತವನ್ನು Divisional Controller, KSRTC, Bengaluru Central Division, Bengaluru ರವರ ಹೆಸರಿನಲ್ಲಿ ಡಿಡಿಯನ್ನು ಪಡೆದು, ಮೂಲ ಡಿಡಿಗಳನ್ನು ಹಾಗೂ ವಿಳಾಸದ ಬಗ್ಗೆ ಮೂಲ ದಾಖಲಾತಿಗಳನ್ನು ಟೆಂಡರ್ ತೆರೆಯುವ ಸಮಯದಲ್ಲಿ ಹಾಜರುಪಡಿಸುವುದು. ಇ-ಟೆಂಡರ್ ಅರ್ಜಿಗಳನ್ನು / ದಸ್ತಾವೇಜುಗಳನ್ನು ಇ-ಪ್ರೋಕ್ಯೂರ್‌ಮೆಂಟ್ ವೆಬ್‌ಸೈಟ್ https://www.eproc.Karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿ ಶುಲ್ಕ ಹಾಗೂ ಇ.ಎಂ.ಡಿ ಮೊತ್ತದ ಡಿಡಿ ಪ್ರತಿಗಳನ್ನು, ವಿಳಾಸದ ಮಾಹಿತಿ ಬಗ್ಗೆ ಹಾಗೂ ಸಂಬಂಧಪಟ್ಟ ದಾಖಲಾತಿಗಳ ಪ್ರತಿಗಳನ್ನು ಇ-ಪೋರ್ಟಲ್‌ನಲ್ಲಿ ದಿನಾಂಕ: 24-09-2018 ರಂದು 12:00 ಗಂಟೆಯವರೆಗೆ ಅಪ್‌ಲೋಡ್ ಮಾಡಬಹುದು. ದಿನಾಂಕ: 26-09-2018 ರಂದು (ಯಾವುದೇ ತಾಂತ್ರಿಕ ದೋಷ ಇಲ್ಲದಿದ್ದಲ್ಲಿ) ಇ-ಟೆಂಡರ್‌ನ್ನು ತೆರೆಯಲಾಗುವುದು. ಭಾಗವಹಿಸಿರುವವರು ಇ-ಟೆಂಡರ್ ತೆರೆಯುವ ಸಮಯದಲ್ಲಿ ಹಾಜರಿರುವುದು. **ಮಳಿಗೆಗಳ ವಿವರಗಳು ಈ ಕೆಳಕಂಡಂತಿವೆ.**

| ಕ್ರಸಂ | ಮಳಿಗೆಗಳ ವಿವರ | ವಿಸ್ತೀರ್ಣ | ಮಾಸಿಕ ಶುಲ್ಕ | ಇ.ಎಂ.ಡಿ(ರೂ) | ಅರ್ಜಿ ಶುಲ್ಕ / ಜಿಎಸ್‌ಟಿ | ಖಾಲಿಯಾಗುವ ದಿನಾಂಕ | ಮೀಸಲಾತಿ |
|---|---|---|---|---|---|---|---|
| 1 | ಮಳಿಗೆ ಸಂಖ್ಯೆ-1 (ವಾ.ಸಂ) | 118 (ಚ.ಅಡಿಗಳು) | 20497-00 | 61491-00 | 205+37 | 13-11-2018 | ವಿಕಲಚೇತನರು |
| 2 | ಮಳಿಗೆ ಸಂಖ್ಯೆ-2 (ವಾ.ಸಂ) | 118 (ಚ.ಅಡಿಗಳು) | 27225-00 | 81675-00 | 272+49 | 01-01-2019 | ಪರಿಶಿಷ್ಟ ಪಂಗಡ |
| 3 | ಮಳಿಗೆ ಸಂಖ್ಯೆ-4 (ವಾ.ಸಂ) | 118 (ಚ.ಅಡಿಗಳು) | 29262-00 | 87786-00 | 293+53 | 01-01-2019 | ಪರಿಶಿಷ್ಟ ಜಾತಿ |
| 4 | ಮಳಿಗೆ ಸಂಖ್ಯೆ-7 (ವಾ.ಸಂ) | 118 (ಚ.ಅಡಿಗಳು) | 29645-00 | 88935-00 | 297+54 | 01-01-2019 | ಸಾಮಾನ್ಯ ವರ್ಗ |
| 5 | ಮಳಿಗೆ ಸಂಖ್ಯೆ-8 (ವಾ.ಸಂ) | 118 (ಚ.ಅಡಿಗಳು) | 13177-00 | 39531-00 | 132+24 | 21-12-2018 | ಸಾಮಾನ್ಯ ವರ್ಗ |
| 6 | ಮಳಿಗೆ ಸಂಖ್ಯೆ-11 (ವಾ.ಸಂ) | 118 (ಚ.ಅಡಿಗಳು) | 30403-00 | 91209-00 | 304+56 | ಖಾಲಿಯಿರುತ್ತದೆ. | ಪರಿಶಿಷ್ಟ ಜಾತಿ |

ಮೇಲಿನ ಮಳಿಗೆಗಳಿಗೆ ಇ-ಟೆಂಡರ್‌ನಲ್ಲಿ ಭಾಗವಹಿಸುವವರ ಪೈಕಿ ಯಶಸ್ವಿಯಾದವರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಷರತ್ತು ಮತ್ತು ನಿಬಂಧನೆಗಳನ್ನು ಹಾಗೂ ಕೇಂದ್ರ/ರಾಜ್ಯ ಸರ್ಕಾರಗಳು ವಿಧಿಸುವ ತೆರಿಗೆಗಳು ಮತ್ತು ಷರತ್ತುಗಳಿಗೆ ಬದ್ಧರಾಗಿರಬೇಕು. ಸಲ್ಲಿಸಿರುವ ಅರ್ಜಿಗಳು ಕ್ರಮಬದ್ಧವಾಗಿಲ್ಲದ ಪಕ್ಷದಲ್ಲಿ ತಿರಸ್ಕರಿಸಲಾಗುವುದು. ಯಾವುದೇ ಕಾರಣ ನೀಡದೆ ಇ-ಟೆಂಡರ್‌ನ್ನು ಪುರಸ್ಕರಿಸುವ / ರದ್ದುಪಡಿಸುವ ಅಥವಾ ಮಾರ್ಪಾಡು ಮಾಡುವ ಹಕ್ಕನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: 7760990029 & 7760990252 ಗಳನ್ನು ಸಂಪರ್ಕಿಸಲು ಕೋರಲಾಗಿದೆ.

ವಿಭಾಗೀಯ ನಿಯಂತ್ರಣಾಧಿಕಾರಿ.
ಕ.ರಾ.ರ.ಸಾ.ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗ.
ಶಾಂತಿನಗರ, ಬೆಂಗಳೂರು.